# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

**<u>ಕಾರ್ಯಕಲಾಪಗಳ ಪಟ್ಟಿ</u>**

**ಗುರುವಾರ, ದಿನಾಂಕ: 01ನೇ ಡಿಸೆಂಬರ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

### 01. ಪ್ರಶ್ನೋತ್ತರ

| | | | |
|---|---|---|---|
| ಅ) | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಒಂಭತ್ತನೆಯ ಪಟ್ಟಿ |
| ಆ) | **ತಡೆಹಿಡಿಯಲಾದ ಪ್ರಶ್ನೆ:**<br>4ನೇ ಪಟ್ಟಿಯಿಂದ ಶ್ರೀ ವಿ.ಎಸ್. ಉಗ್ರಪ್ಪ, ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 60 (417) | : | **ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು** |
| ಇ) | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಒಂಭತ್ತನೆಯ ಪಟ್ಟಿ |

### 02. ಶಾಸನ ರಚನೆ

**<u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>**

**I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಬಸವರಾಜ ರಾಯರೆಡ್ಡಿ** (ಮಾನ್ಯ ಉನ್ನತ ಶಿಕ್ಷಣ ಸಚಿವರು) ಅವರು:-

01. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

02. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**II. ಕರ್ನಾಟಕ ಕೆಲವು ಸ್ಥಳಗಳ ಹೆಸರುಗಳನ್ನು ಬದಲಾಯಿಸುವ ವಿಧೇಯಕ, 2016**

**ಶ್ರೀ ಟಿ.ಬಿ. ಜಯಚಂದ್ರ** (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು:-

01. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಕೆಲವು ಸ್ಥಳಗಳ ಹೆಸರುಗಳನ್ನು ಬದಲಾಯಿಸುವ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

02. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2

**III. ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2016**

**ಶ್ರೀ ಕೆ.ಜೆ. ಜಾರ್ಜ್** (ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ಪಟ್ಟಣ ಯೋಜನಾ ಸಚಿವರು) ಅವರು:-

01. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

02. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**IV. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಅರಣ್ಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ಹಾಗೂ ಸ್ಥಳನಿಯುಕ್ತಿಗಳ ನಿಯಂತ್ರಣ) ವಿಧೇಯಕ, 2016**

**ಶ್ರೀ ಬಿ.ರಮಾನಾಥ ರೈ** (ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) ಅವರು:-

01. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಅರಣ್ಯ, ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ಹಾಗೂ ಸ್ಥಳನಿಯುಕ್ತಿಗಳ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

02. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 03. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಪುಟ್ಟಣ್ಣ** ಅವರು ರಾಜ್ಯದ ಅನುದಾನಿತ ಪ್ರೌಢ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹಾಗೂ ಹಾಜರಾತಿ ಕೊರತೆಯನ್ನು ಕಾಪಾಡಲು ಶಿಕ್ಷಕರುಗಳು ವಿಫಲವಾಗಿರುವ ಕಾರಣದಿಂದ ವೇತನಾನುದಾನ ಹಿಂಪಡೆದು ಅವೈಜ್ಞಾನಿಕವಾಗಿ ಹೊರಡಿಸಿರುವ ಆದೇಶವನ್ನು ಹಿಂಪಡೆಯುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀಯುತರುಗಳಾದ: ಕೆ.ಸಿ. ಕೊಂಡಯ್ಯ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಕೆ. ಪ್ರತಾಪ ಚಂದ್ರ ಶೆಟ್ಟಿ, ಬಸನಗೌಡ ಆರ್. ಪಾಟೀಲ್ (ಯತ್ನಾಳ್), ಎಂ.ಕೆ. ಪ್ರಾಣೇಶ್ ಹಾಗೂ** ಇತರರುಗಳು ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯಡಿ ಸ್ಥಳೀಯ ಸಂಸ್ಥೆಗಳ ಸಾಂವಿಧಾನಿಕ ಹಕ್ಕನ್ನು ಉಳಿಸಿಕೊಳ್ಳುವ ಮತ್ತು ಜಾರಿಗೊಳಿಸುವ ನಿಟ್ಟಿನಲ್ಲಿ ಶ್ರೀ ರಮೇಶ್ ಕುಮಾರ್ ಸಮಿತಿಯ ವರದಿಯನ್ನು ಅನುಷ್ಠಾನಗೊಳಿಸುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

**೦4. ನಿಯಮ ೩೩೦ರ ಮೇರೆಗೆ**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಪ್ರಾರಂಭಿಸಿರುವ "ಪಂಚಾಯತ್-೧೦೦ ಬಾಪೂಜಿ ಸೇವಾ ಕೇಂದ್ರ"ಗಳಲ್ಲಿ ಗಣಕ ಯಂತ್ರ-ಪ್ರಿಂಟರ್, ಪೀಠೋಪಕರಣ ಹಾಗೂ ಇತ್ಯಾದಿ ಮೂಲಭೂತ ಸೌಲಭ್ಯಗಳನ್ನು ಒದಗಿಸದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

**೦೫. ಮಹದಾಯಿ ಹಾಗೂ ಕಳಸಾ ಬಂಡೂರಿ ಯೋಜನೆಗಳ ನೀರಿನ ಸಮಸ್ಯೆಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.**

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**